**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಟಿ.ನರಸೀಪುರ**

ದಿನಾಂಕ 23 ನೇ ಫೆಬ್ರುವರಿ 2026

**ಸಿ.ಸಿ.454/2026**

ಪಿರ್ಯಾದುದಾರರುಃ ರಾಜ್ಯದ ಪರ ಬನ್ನೂರು ಪೊಲೀಸರು

ವಿರುದ್ಧ

ಆರೋಪಿಃ ಮಹೇಶ ಬಿನ್ ಲೇಟ್ ಮಲ್ಲಯ್ಯ, 55 ವರ್ಷ,
ವಾಸಃ ಸೋಸಲೆ ಗ್ರಾಮ, ಟಿ ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

**ಆರೋಪಣೆ**

**ಶ್ರೀ ಸಚಿನ್ ಹೆಚ್.ಆರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಟಿ.ನರಸೀಪುರ, ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಕೆಳಕಂಡಂತೆ ಆರೋಪಣೆಯನ್ನು ಮಾಡುತ್ತೇನೆ.**

ದಿನಾಂಕ 14.02.2026 ರಂದು ರಾತ್ರಿ 7.45 ಗಂಟೆ ಸಮಯದಲ್ಲಿ ಬನ್ನೂರು ಠಾಣಾ ವ್ಯಾಪ್ತಿಯ ಟಿ.ನರಸೀಪುರ ತಾಲ್ಲೂಕು ಸೋಸಲೆ ಗ್ರಾಮದ ಹೊನ್ನಾದೇವಿ ದೇವಸ್ಥಾನಕ್ಕೆ ಹೋಗುವ ರಸ್ತೆಯಲ್ಲಿ ಆರೋಪಿಯಾದ ನೀವು ನಿಮ್ಮ ಚಿಲ್ಲರೆ ಅಂಗಡಿ ಮುಂಭಾಗ ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವನೆ ಮಾಡಲು ಸ್ಥಳಾವಕಾಶ ಮಾಡಿಕೊಟ್ಟಿದ್ದು, ಆ ಮೂಲಕ ಕರ್ನಾಟಕ ಅಬಕಾರಿ ಕಾಯಿದೆಯನ್ನು ಉಲ್ಲಂಘಿಸಿದ್ದು ಕಲಂ.32(3) ರನ್ವಯ ಅಪರಾಧ ಮಾಡಿರುತ್ತೀರಿ ಎಂದು ನಿಮ್ಮ ಮೇಲೆ ಆಪಾದನೆ ಇದೆ.

**(ಮೇಲ್ಕಂಡ ಆರೋಪಗಳ ಬಗ್ಗೆ ಆರೋಪಿಯಾದ ನೀವು ಈ ಮಾನ್ಯ ನ್ಯಾಯಾಲಯದಲ್ಲಿ ವಿಚಾರಣೆಗೊಳಪಡತಕ್ಕದ್ದು ಎಂದು ನಾನು ನಿರ್ದೇಶಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**ಆರೋಪಿಯ ಹೇಳಿಕೆ**

ಪ್ರಶ್ನೆ-1 ಈಗ ಓದಿ ಹೇಳಿದ ಆರೋಪಣೆಯನ್ನು ಅರ್ಥ ಮಾಡಿಕೊಂಡಿರಾ ?

ಉತ್ತರಃ

ಪ್ರಶ್ನೆ-2 ಮೇಲೆ ಹೇಳಿದ ಆರೋಪಣೆಯನ್ನು ಒಪ್ಪಿಕೊಳ್ಳುವಿರಾ ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?
ಉತ್ತರಃ

**(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ತಿಳಿದ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಬರೆದು ಕೊಂಡಿದ್ದು ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.)**

**(ಸಚಿನ್ ಹೆಚ್.ಆರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಟಿ.ನರಸೀಪುರ.**

**ಆರೋಪಿಯ ಸಹಿಃ**